ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೦**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೨೪ನೇ ಜುಲೈ, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೫. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ವರ್ಗಾವಣೆಯಲ್ಲಿ ಮೀಸಲಾತಿ ಕಲ್ಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೨೮೬ (೨೨೨೧) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿಶ್ವವಿದ್ಯಾಲಯದ ಬೋಧಕ–ಬೋಧಕೇತರ ಸಿಬ್ಬಂದಿಗಳನ್ನು ವರ್ಗಾವಣೆಯಲ್ಲಿ ಅವಕಾಶ ಕಲ್ಪಿಸದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೈದ್ರಾಬಾದ್–ಕರ್ನಾಟಕದ ೩೭೧(ಜೆ) ಅನುಚ್ಛೇದದ ಅಡಿಯಲ್ಲಿ ಎಲ್ಲಾ ಇಲಾಖೆಗಳಲ್ಲಿ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದ್ದು, ವಿಶ್ವವಿದ್ಯಾಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ–ಬೋಧಕೇತರ ಸಿಬ್ಬಂದಿಗಳಿಗೆ ಮಾತ್ರ ಕಲ್ಪಿಸದೇ ಅನ್ಯಾಯ ಮಾಡುತ್ತಿರುವುದು ಸಮಂಜಸವೇ ; (ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳನ್ನು ಹೊರತುಪಡಿಸಿ ವಿಶ್ವವಿದ್ಯಾಲಯಗಳಲ್ಲಿನ ವರ್ಗಾವಣೆಗೆ ಸಂಬಂಧಿಸಿದಂತೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇದಕ್ಕಿರುವ ಮಾನದಂಡಗಳೇನು ; ಅರ್ಹತೆ ಇದ್ದರೂ ವರ್ಗಾವಣೆ ಮಾಡದಿರಲು ಕಾರಣಗಳೇನು ?

## ಶೌಚಾಲಯ ಹಾಗೂ ಮುಕ್ತಿಧಾಮಗಳ ನಿರ್ಮಾಣ ಕುರಿತು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೮೭ (೨೨೩೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ನೇ ಸಾಲಿನಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಿಸುವ ಗುರಿ ಎಷ್ಟು ; ಎಷ್ಟು ಶೌಚಾಲಯಗಳನ್ನು ಹಾಲಿ ನಿರ್ಮಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಸಾಲಿನಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ;

(ಇ) ಪ್ರತಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದಲ್ಲಿ ೨೦ ಕಿ.ಮೀ. ರಸ್ತೆ ಅಭಿವೃದ್ಧಿಗೊಳಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆಯೇ ; ಇದರಲ್ಲಿ ೬ ಕಿ.ಮೀ. ರಸ್ತೆಯನ್ನು ಪರಿಶಿಷ್ಟ ಜಾತಿ / ಪಂಗಡ ಹೆಚ್ಚಿರುವ ಗ್ರಾಮಗಳಲ್ಲಿ ನಿರ್ಮಿಸಲಾಗುವುದೇ ;

(ಈ) ಸದರಿ ಯೋಜನೆ ಅನ್ವಯ ಎಷ್ಟು ವಿಧಾನ ಸಭಾ ಕ್ಷೇತ್ರಗಳಲ್ಲಿ ರಸ್ತೆಗಳನ್ನು ಅಭಿವೃದ್ಧಿಗೊಳಿಸಲಾಗಿದೆ ; (ವಿವರ ನೀಡುವುದು)

(ಉ) ೨೦೧೮–೧೯ನೇ ಸಾಲಿನಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಮುಕ್ತಿಧಾಮ ನಿರ್ಮಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಊ) ಎಷ್ಟು ಗ್ರಾಮಗಳಲ್ಲಿ ಆಟದ ಮೈದಾನ, ಸ್ಮಶಾನ, ಕಣ ನಿರ್ಮಾಣ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಪ್ರವಾಸಿಗರ ಆಕರ್ಷಣೆಗೆ ಕೈಗೊಂಡ ಯೋಜನೆಗಳು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೮೮ (೧೪೭೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಶ್ವದ ಪ್ರವಾಸಿಗರ ಆಕರ್ಷಣೆಗೆ ಸರ್ಕಾರ ಕೈಗೆತ್ತಿಕೊಂಡಿರುವ ಯೋಜನೆಗಳಾವುವು ; ಮೂಲಭೂತ ಸೌಲಭ್ಯಗಳ ಕೊರತೆಯ ಹಿನ್ನೆಲೆಯಲ್ಲಿ ಪ್ರವಾಸೋದ್ಯಮಕ್ಕೆ ಹಿನ್ನಡೆಯಾಗಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಆ) ಈ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖಾ ವ್ಯಾಪ್ತಿಯ ಆಸ್ತಿ–ಸ್ವತ್ತುಗಳನ್ನು ಖಾಸಗಿಯವರಿಗೆ ಗುತ್ತಿಗೆಗೆ ನೀಡಲು ಸರ್ಕಾರ ಮುಂದಾಗಿದೆಯೇ ;

(ಇ) ಹಾಲಿ ಇರುವ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಜೊತೆಗೆ ಕರ್ನಾಟಕ ಪ್ರವಾಸೋದ್ಯಮ ಮೂಲಸೌಕರ್ಯ ಹೆಸರಲ್ಲಿ ಕಂಪನಿ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಪಿಪಿಡಿ ಯೋಜನೆಯಲ್ಲಿ ಅಭಿವೃದ್ಧಿಪಡಿಸಲು ಇರುವ ತೊಂದರೆಗಳೇನು ; ಇಲಾಖೆಯ ಹಿಡಿತದಲ್ಲಿ ಎಷ್ಟು ಎಕರೆ ಜಾಗ ರಾಜ್ಯದಲ್ಲಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಸದರಿ ಸ್ಥಳಗಳ ಅಭಿವೃದ್ಧಿಗೆ ಬೇಕಾಗುವ ಸಂಪನ್ಮೂಲ ಎಷ್ಟು ; ಇದನ್ನು ಖಾಸಗಿಯವರಿಂದ ಸಂಗ್ರಹಿಸಲಾಗುವುದೇ ; ಇದಕ್ಕಾಗಿ ಗುರುತಿಸಿರುವ ಪ್ರವಾಸಿ ಸ್ಥಳಗಳಾವುವು ? (ಯೋಜನೆಯ ಸಂಪೂರ್ಣ ವಿವರಗಳನ್ನು ಒದಗಿಸುವುದು)

## ಶಾಲಾ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೮೯ (೨೨೪೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಶಾಲೆ, ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸರ್ಕಾರಿ, ಖಾಸಗಿ ಅನುದಾನಿತ, ಅನುದಾನ ರಹಿತ ವಿವರ ನೀಡುವುದು)

(ಆ) ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಶೌಚಾಲಯ, ನೀರಿನ ವ್ಯವಸ್ಥೆ ಇದೆಯೇ ; ಶೌಚಾಲಯ ಹಾಗೂ ನೀರಿನ ವ್ಯವಸ್ಥೆ ಇಲ್ಲದಿರುವ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸರ್ಕಾರಿ–ಖಾಸಗಿ ಶಾಲಾ–ಕಾಲೇಜುಗಳ ಸಂಖ್ಯೆಗಳೆಷ್ಟು ; (ವಿವರ ನೀಡುವುದು)

(ಇ) ಎಲ್ಲಾ ಪದವಿ ಪೂರ್ವ ಮತ್ತು ಪ್ರೌಢ ಶಾಲೆಗಳಲ್ಲಿ ಬಾಲಕ–ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯ ನಿರ್ಮಿಸಲಾಗಿದೆಯೇ ; ಬಾಲಕಿಯರಿಗೆ ವಿಶ್ರಾಂತಿ ಕೊಠಡಿ ಸೌಲಭ್ಯವಿದೆಯೇ ; ಇಲ್ಲವಾದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ರಾಜ್ಯದ ಪ್ರತಿಯೊಂದು ಶಾಲೆ, ಕಾಲೇಜುಗಳಲ್ಲಿ ಕುಡಿಯುವ ನೀರಿನ ಸೌಲಭ್ಯ, ಬಾಲಕ–ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ, ಬಾಲಕಿಯರ ವಿಶ್ರಾಂತಿ ಕೊಠಡಿ ಒದಗಿಸಲು ಸರ್ಕಾರದ ಯೋಜನೆಗಳೇನು ; ಯಾವಾಗ ಸದರಿ ಕಾರ್ಯಕ್ರಮ ಪೂರ್ಣಗೊಳಿಸಲಾಗುವುದು ?

## ಬೋಧಕ ಹುದ್ದೆಗಳ ಸಂಖ್ಯೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ ) –**

೨೯೦ (೨೧೯೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು/ ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಹುದ್ದೆಗಳು ಎಂದಿನಿಂದ ಖಾಲಿ ಇವೆ ;

(ಇ) ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ಎಷ್ಟು ಮಂದಿ ಅತಿಥಿ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ ; ಅತಿಥಿ ಶಿಕ್ಷಕರಿಗೆ ನೀಡುತ್ತಿರುವ ಗೌರವಧನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ರಾಯಚೂರು ನಗರದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ನಿರ್ಮಾಣ ಮಾಡುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೧ (೨೨೫೪) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ನಗರದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ನಿರ್ಮಾಣ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮವೇನು ;

(ಆ) ಮಾನ್ವಿ ತಾಲ್ಲೂಕಿನ ಸಿರಾವಾರ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮವೇನು ;

(ಇ) ಡಾ: ಡಿ.ಎಂ. ನಂಜುಂಡಪ್ಪ ವರದಿಯಲ್ಲಿ ಅತ್ಯಂತ ಹಿಂದುಳಿದ ತಾಲ್ಲೂಕಾಗಿ ಗುರುತಿಸಿಕೊಂಡಿರುವ ಮಾನ್ವಿ ತಾಲ್ಲೂಕಿನಲ್ಲಿ ಬರುವ ಕವಿತಾಳ್ ಪಟ್ಟಣದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು ?

## ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೯೧ (೨೨೭೭) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಮಾಹಿತಿ ನೀಡುವುದು)

(ಆ) ಈ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರ ಯಾವಾಗ ಅನುಮತಿ ನೀಡಲಿದೆ ?

## ಜ್ಯೋತಿ ಸಂಜೀವಿನಿ ಯೋಜನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೯೩ (೨೨೮೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಜ್ಯೋತಿ ಸಂಜೀವಿನಿ ಯೋಜನೆ ಜಾರಿಗೊಳಿಸಲಾಗಿದೆಯೇ ;

(ಆ) ಜಾರಿಗೊಳಿಸಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು ;

(ಇ) ಈ ಯೋಜನೆಯನ್ನು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ವಿಸ್ತರಿಸಲು ಸರ್ಕಾರ ಚಿಂತಿಸಿದೆಯೇ ?

## ಖಾನಾಪುರ ತಾಲ್ಲೂಕಿನ ಅನೇಕ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯ ಇಲ್ಲದಿರುವುದು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೯೪ (೧೪೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಅನೇಕ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳಾದ ಗ್ರಾಮಪಂಚಾಯತ್ ಕಟ್ಟಡ, ಶುದ್ಧ ಕುಡಿಯುವ ನೀರು, ಶೌಚಾಲಯ, ಚರಂಡಿ, ರಸ್ತೆ ಇನ್ನಿತರ ಮೂಲಭೂತ ಸೌಕರ್ಯಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾನಾಪೂರ ತಾಲ್ಲೂಕಿನಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳು ಎಷ್ಟು ;

(ಇ) ಎಷ್ಟು ಗ್ರಾಮಪಂಚಾಯಿತಿಗಳಿಗೆ ಶಾಶ್ವತ ಕುಡಿಯುವ ನೀರಿನ ಸೌಕರ್ಯ ಕಲ್ಪಿಸಲಾಗಿದೆ ; ಶಾಶ್ವತ ಕುಡಿಯುವ ನೀರಿನ ಸೌಕರ್ಯಗಳಿಲ್ಲದೆ ಇರುವ ಗ್ರಾಮ ಪಂಚಾಯಿತಿಗಳು ಎಷ್ಟು ; ಈ ಗ್ರಾಮ ಪಂಚಾಯಿತಿಗಳಿಗೆ ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ?

## ಗ್ರಾಮ ಪಂಚಾಯ್ತಿಗಳಲ್ಲಿ ಅಧಿಕೃತ ಬೈಲಾ ಅಳವಡಿಸಿಕೊಳ್ಳುವುದು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೫ (೧೪೬೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮ ಪಂಚಾಯ್ತಿಗಳಿಗೆ ಅಧಿಕೃತ ಬೈಲಾಗಳನ್ನು ಅಳವಡಿಸಿಕೊಳ್ಳಲು ಸರ್ಕಾರ ನಿರ್ಧರಿಸಿದೆಯೇ ; ಅಂತಹ ಬೈಲಾ ನಿಯಮಗಳೇನು ; ವರ್ಷವೊಂದಕ್ಕೆ ಸರ್ಕಾರದಿಂದ ನೀಡುತ್ತಿರುವ ಅನುದಾನವೆಷ್ಟು ; ಇದರ ಬಳಕೆಗೆ ಇರುವ ಮಾನದಂಡಗಳೇನು ;

(ಆ) ಆಡಳಿತ ವಿಕೇಂದ್ರೀಕರಣ ದೃಷ್ಟಿಯಿಂದ ಆ ಭಾಗದ ಪರವಾನಗಿ ನೀಡುವ ಅಧಿಕಾರವನ್ನು ಆ ಪಂಚಾಯ್ತಿಗೆ ನೀಡಿರುವುದು ನಿಜವೇ ; ಇದರಿಂದಾಗಿ ಈ ಭಾಗದ ಮನೆ ದುರಸ್ಥಿ ನಿರ್ಮಾಣ ಇತ್ಯಾದಿ ಸಣ್ಣ–ಪುಟ್ಟ ಕೆಲಸಗಳಿಗೂ ಗೊಂದಲ, ಸಮಸ್ಯೆ ನಿರ್ಮಾಣವಾಗಿರುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಮನೆ ಕಟ್ಟಲು ಅನುಮತಿ ಇಲ್ಲದಿರುವುದರಿಂದ ಬ್ಯಾಂಕ್ ಸಾಲ ಇತ್ಯಾದಿ ಸಿಗದೆ ಗ್ರಾಮಸ್ಥರು ತೊಂದರೆ ಅನುಭವಿಸುತ್ತಿರುವ ಪ್ರಕರಣಗಳು ಬೆಳಕಿಗೆ ಬಂದಿದೆಯೇ ; ಎಲ್ಲೆಲ್ಲಿ ಈ ರೀತಿ ನಡೆದಿರುತ್ತದೆ ; ಇದರ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸರಕಾರಿ ಪದವಿ ಪೂರ್ವ ಕಾಲೇಜಿನ ಸಮಸ್ಯೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೯೬ (೨೨೬೬) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕುಂದಾಪುರ ತಾಲ್ಲೂಕು ಕೇಂದ್ರದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ತರಗತಿವಾರು, ವಿಭಾಗವಾರು ವಿವರ ನೀಡುವುದು)

(ಆ) ಸದರಿ ಕಾಲೇಜಿನಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ವಿವಿಧ ವಿಭಾಗಗಳಿಗೆ ಪ್ರವೇಶಾತಿ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಈ ಅರ್ಜಿಗಳಲ್ಲಿ ಪ್ರವೇಶಾವಕಾಶ ನೀಡಲಾದ ಅರ್ಜಿಗಳೆಷ್ಟು ; ಮತ್ತು ಪ್ರವೇಶಾವಕಾಶ ನಿರಾಕರಿಸಲಾದ ಅರ್ಜಿಗಳೆಷ್ಟು ; (ವಿಭಾಗವಾರು ವಿವರ ನೀಡುವುದು)

(ಇ) ಈ ಕಾಲೇಜಿನ ಅಭಿವೃದ್ಧಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಕಾಮಗಾರಿ ನಿರ್ವಹಿಸುತ್ತಿರುವ ನಿರ್ಮಿತಿ ಕೇಂದ್ರ ಮತ್ತು ಭೂಸೇನೆ ಇವರುಗಳು ಈ ತನಕ ಕಾಮಗಾರಿ ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ದಿ: ೦೭/೦೭/೨೦೧೫ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಈ ಕಾಲೇಜಿನಲ್ಲಿರುವ ಸಮಸ್ಯೆಗಳ ಕುರಿತು ಬಂದ ವರದಿಯನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದಲ್ಲಿ ತೆಗೆದುಕೊಂಡ ಕ್ರಮಗಳೇನು ;

(ಉ) ಕುಂದಾಪುರ ತಾಲ್ಲೂಕಿನ ನಕ್ಸಲ್ ಪ್ರಭಾವಿತ ಪ್ರದೇಶವಾದ ಅಮವಾಸೆಬೈಲು ಬಸ್ರೂರಿಗೆ ನೂತನ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲಾಗುವುದೇ ?

## ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಉಪನ್ಯಾಸಕರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೨೯೭ (೨೨೭೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಉಪನ್ಯಾಸಕರು ಮತ್ತು ಆಡಳಿತ ವಿಭಾಗದಲ್ಲಿರುವ ಖಾಲಿ ಇರುವ ಹುದ್ದೆಗಳೆಷ್ಟು ; ಹುದ್ದೆಗಳನ್ನು ತುಂಬಲು ಕೈಗೊಂಡ ಕ್ರಮಗಳೇನು ;

(ಆ) ವಿಶ್ವವಿದ್ಯಾನಿಲಯದಲ್ಲಿ ಪ್ರಾರಂಭಿಸಿದ ಕೋರ್ಸುಗಳಲ್ಲಿ ವಿದ್ಯಾರ್ಥಿಗಳ ಕೊರತೆ ಇರುವ ಬಗ್ಗೆ ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ವಿದ್ಯಾರ್ಥಿಗಳನ್ನು ಆಕರ್ಷಿಸಲು ವಿಶ್ವವಿದ್ಯಾನಿಲಯ ಕೈಗೊಂಡ ಕ್ರಮಗಳೇನು ;

(ಇ) ೨೦೧೪–೧೫ರಲ್ಲಿ ವಿಶ್ವವಿದ್ಯಾನಿಲಯಕ್ಕೆ ರಾಜ್ಯ ಸರ್ಕಾರದಿಂದ ಮತ್ತು ಯುಜಿಸಿ ಯಿಂದ ಪಡೆದ ಅನುದಾನ ಎಷ್ಟು ; ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳಾವುವು ; (ವಿವರ ನೀಡುವುದು)

(ಈ) ವಿಶ್ವವಿದ್ಯಾನಿಲಯದಲ್ಲಿ ಶಿಕ್ಷಣ ಪಡೆಯುತ್ತಿರುವ ವಿದೇಶಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅವರಿಗೆ ಒದಗಿಸಿದ ಸೌಕರ್ಯಗಳಾವುವು ; (ವಿವರ ನೀಡುವುದು)

(ಉ) ವಿಶ್ವವಿದ್ಯಾನಿಲಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಪೀಠಗಳೆಷ್ಟು ; ೨೦೧೪–೧೫ನೇ ಸಾಲಿನಲ್ಲಿ ಪೀಠಗಳಿಂದ ಕೈಗೊಂಡ ಕಾರ್ಯಕ್ರಮಗಳಾವುವು ; ಖರ್ಚು ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಊ) ೨೦೧೪–೧೫ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯದಲ್ಲಿ ಡಾಕ್ಟರೇಟ್ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಯಾವ ಯಾವ ಕ್ಷೇತ್ರಗಳಲ್ಲಿ ಡಾಕ್ಟರೇಟ್ ಪದವಿ ನೀಡಲಾಗಿದೆ ? (ವಿವರ ನೀಡುವುದು)

## ತಲಕಾಡಿನ ಶಿಕ್ಷಕರ ಭವನ ಪಾಳು ಬಿದ್ದಿರುವುದು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೮ (೧೪೬೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಜಿಲ್ಲೆ, ತಲಕಾಡಿನಲ್ಲಿ ಎರಡು ವರ್ಷಗಳ ಹಿಂದೆ ನಿರ್ಮಿಸಿರುವ ಶಿಕ್ಷಕರ ಭವನ ಮತ್ತು ವಸತಿ ಗೃಹಗಳು ಪಾಳು ಬಿದ್ದು ಹಾಳಾಗಿ ಜೀರ್ಣಾವಸ್ಥೆಗೆ ತಲುಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಶಿಕ್ಷಕರ ಭವನವು ಪಾಳು ಬೀಳಲು ಕಾರಣಗಳೇನು ; ಈ ಕಟ್ಟಡದ ನಿರ್ಮಾಣಕ್ಕೆ ತಗುಲಿರುವ ವೆಚ್ಚ ಎಷ್ಟು ;

(ಇ) ಇದನ್ನು ಶಿಕ್ಷಣ ಇಲಾಖೆಯ ಕಛೇರಿಗಳಿಗಾದರೂ ನೀಡಲು ಕ್ರಮ ಜರುಗಿಸಲಾಗುವುದೇ ?

## ಕರ್ನಾಟಕ ಗೃಹ ಮಂಡಳಿಯಿಂದ ಹೊಸ ಬಡಾವಣೆಗಳ ನಿರ್ಮಾಣ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೯೯ (೧೪೭೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ಸಾರ್ವಜನಿಕರ ಉಪಯೋಗಕ್ಕಾಗಿ ಎಲ್ಲೆಲ್ಲಿ ಹೊಸ ಬಡಾವಣೆಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಬಡಾವಣೆಗಳ ನಿರ್ಮಾಣಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; (ಈ ಬಡಾವಣೆಗಳ ನಿರ್ಮಾಣದ ಪ್ರಗತಿಯ ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೊಸ ಬಡಾವಣೆಗಳನ್ನು ರಚಿಸಲು ಸ್ವಾಧೀನಪಡಿಸಿಕೊಂಡ ರೈತರ ಜಮೀನೆಷ್ಟು ; ಪ್ರತಿ ಎಕರೆ ಜಮೀನಿಗೆ ರೈತರಿಗೆ ನೀಡಿರುವ ಹಣವೆಷ್ಟು ; (ದಾಖಲೆಗಳೊಂದಿಗೆ ಪೂರ್ಣ ವಿವರ ನೀಡುವುದು)

(ಈ) ಹೊಸ ಬಡಾವಣೆಗಳನ್ನು ಅಭಿವೃದ್ಧಿಪಡಿಸಲು ಪ್ರತಿ ಎಕರೆಗೆ ಖರ್ಚು ಮಾಡಿರುವ ಮೊತ್ತವೆಷ್ಟು ; (ದಾಖಲೆಗಳೊಂದಿಗೆ ಪೂರ್ಣ ವಿವರ ನೀಡುವುದು)

(ಉ) ಹೊಸ ಬಡಾವಣೆಗಳನ್ನು ನಿರ್ಮಿಸಲು ಯಾವ ಯಾವ ಗುತ್ತಿಗೆದಾರರನ್ನು ನೇಮಿಸಲಾಗಿದೆ ಹಾಗೂ ಗುತ್ತಿಗೆ ನೀಡುವಾಗ ಅನುಸರಿಸಲಾಗುವ ಮಾನದಂಡಗಳೇನು ? (ಗುತ್ತಿಗೆದಾರರ ಹೆಸರು, ವಿಳಾಸ ಸಹಿತ ಪೂರ್ಣ ವಿವರಗಳನ್ನು ನೀಡುವುದು)

## ಬಾಲಭವನ ಸೊಸೈಟಿ ನೌಕರರ ವಯೋನಿವೃತ್ತಿ ಹೆಚ್ಚಿಸುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೦ (೧೪೬೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಾಲಭವನ ಸೊಸೈಟಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ವಯೋ ನಿವೃತ್ತಿ ವಯಸ್ಸನ್ನು ೫೮ ವರ್ಷಗಳಿಂದ ೬೦ ವರ್ಷಗಳಿಗೆ ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಎಲ್ಲಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮ / ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ವಯೋ ನಿವೃತ್ತಿ ಮಿತಿಯನ್ನು ಹೆಚ್ಚಿಸಿದ್ದರೂ ಬಾಲಭವನ ಸೊಸೈಟಿ ನೌಕರರು ಈ ಸೌಲಭ್ಯದಿಂದ ವಂಚಿತರಾಗಿರುವುದು ಸರಿಯೇ ;

(ಇ) ಹಾಗಿದ್ದಲ್ಲಿ, ಬಾಲಭವನ ಸೊಸೈಟಿ ನೌಕರರ ವಯೋ ನಿವೃತ್ತಿ ವಯಸ್ಸನ್ನು ೫೮ ರಿಂದ ೬೦ ವರ್ಷಕ್ಕೆ ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 255, ಪ್ರತಿಗಳು 1000 – ಪಿ2